ಅ) ತುಮಕೂರು ಜಿಲ್ಲೆಯಲ್ಲಿನ ಆಸ್ಪತ್ರೆಗಳಲ್ಲಿ ಗ್ರೂಪ್ 'ಡಿ' ಹುದ್ದೆಗಳು ಎಷ್ಟು ಹಾಗೂ ರಾಜ್ಯದಲ್ಲಿ ಎಷ್ಟು ಖಾಲಿ ಇವೆ?

ಆ) ಈ ಹುದ್ದೆಗಳನ್ನು ತುಂಬಲು ಸರ್ಕಾರವು ಏನು ಕ್ರಮ ತೆಗೆದುಕೊಳ್ಳುವುದು?.

ಶ್ರೀಮತಿ ಕೆ.ಎಸ್. ನಾಗರತ್ನಮ್ಮ (ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಚಿವರು);

ಅ) ರಾಜ್ಯದಲ್ಲಿ 2,021

ಜಿಲ್ಲಾ ಆಸ್ಪತ್ರೆ, ತುಮಕೂರು	4
ತುಮಕೂರು ಜಿಲ್ಲೆ	87
ಒಟ್ಟು	91

ಆ) ಶೇ. 50 ಖಾಲಿ ಹುದ್ದೆಗಳನ್ನು ಸಕ್ರಮಗೊಳಿಸಲಾಗುತ್ತಿರವ ದಿನಗೂಲಿ ನೌಕರರ ಪೈಕಿ ತುಂಬಲು ಉದ್ದೇಶಿಸಲಾಗಿದೆ.

ನಿಪ್ಪಾಣಿ ನಗರದಲ್ಲಿ ಹೊಸ ಡಿಪೋ ಸ್ಟ್ಯಾಂಡ್ ಕಟ್ಟಡಗಳ ಬಗ್ಗೆ

1167 - ಶ್ರೀ ಸುಭಾಶ್ ಜೋಶಿ (ನಿಪ್ಪಾಣಿ) : ಮಾನ್ಯ ಸಾರಿಗೆ ಮಂತ್ರಿಗಳು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ನಿಪ್ಪಾಣಿ ನಗರದಲ್ಲಿ ಹೊಸ ಡಿಪೋ ಮತ್ತು ಸ್ಟ್ಯಾಂಡ್ ಕಟ್ಟಡಗಳಿಗೆ ಸರ್ಕಾರವು ಮಂಜೂರಾತಿಯನ್ನು ನೀಡಿರುವುದೇ?

ಆ) ಹಾಗಿದ್ದಲ್ಲಿ ನಿರ್ಮಾಣ ಕಾರ್ಯವನ್ನು ಯಾವಾಗ ಪ್ರಾರಂಭಿಸಲಾಗುವುದು?

ಶ್ರೀ ಅಜೀಜ್ ಸೇತ್ (ಸಾರಿಗೆ ಸಚಿವರು):

ಅ) ನಿಪ್ಪಾಣಿಯಲ್ಲಿ ಕರ್ನಾಟಕ ರಾಜ್ಯ ರಸ್ತೆ ಸಾರಿಗೆ ಸಂಸ್ಥೆಯು ಶಾಶ್ವತ ಬಸ್ ನಿಲ್ದಾಣ ಹಾಗೂ ಡಿಪೋವನ್ನು ನಿರ್ಮಿಸಲಾಗಿದೆ. ಈಗ ಇರತಕ್ಕ ಡಿಪೋವನ್ನು ವಿಸ್ತರಿಸುವ ಬಗ್ಗೆ ಪ್ರಸ್ತಾವನೆಯು ಪರಿಶೀಲನೆಯಲ್ಲಿದೆ.

ಆ) ನಿರ್ಮಾಣದ ಕೆಲಸವನ್ನು ಪ್ರಾರಂಭಿಸುವ ಬಗ್ಗೆ ಕರ್ನಾಟಕ ರಾಜ್ಯ ನಿರ್ಮಾಣ ನಿಗಮದ ಜೊತೆ ವ್ಯವಹರಿಸಲಾಗುತ್ತಿದೆ.

ಚಿಕ್ಕಬಳ್ಳಾಪುರದ ಪ್ರಥಮ ದರ್ಜೆ ಕಾಲೇಜಿನ ಬಗ್ಗೆ

1192 - ಶ್ರೀ ಸಿ. ವೆಂಕಟರಾಯಪ್ಪ (ಬಾಗೇಪಲ್ಲಿ) ; ಮಾನ್ಯ ಶಿಕ್ಷಣ ಮತ್ತು ಸಂಸದೀಯ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?

ಅ) ಅಂದಿನ ಚಿಕ್ಕಬಳ್ಳಾಪುರದ ಮುನಿಸಿಪಲ್ ಪ್ರಥಮ ದರ್ಜೆ ಕಾಲೇಜಿನ (ಈಗಿನ ಸರ್ಕಾರಿ ಪ್ರಥಮ ದರ್ಜೆ ಕಾಲೇಜು) ಬೆರಳಚ್ಚುಗಾರರನ್ನು ಅದೇ ಕಾಲೇಜು ಕಛೇರಿಯ ಅಧೀಕ್ಷಕರನ್ನಾಗಿ ನೇಮಿಸಿರುವುದು ನಿಜವಲ್ಲವೇ?

ಆ) ಹಾಗಿದ್ದಲ್ಲಿ ಅವರನ್ನು ಯಾವ ನಿಯಮದ ಅನ್ವಯ ಕಛೇರಿ ಅಧೀಕ್ಷಕರನ್ನಾಗಿ ನೇಮಕ ಮಾಡಲಾಗಿದೆ?

ಶ್ರೀ ಎಂ. ವೀರಪ್ಪ ಮೊಯಿಲಿ(ಶಿಕ್ಷಣ ಸಚಿವರು):

ಅ) ಇಲ್ಲ.

ಆ) ಉದ್ಭವಿಸುವುದಿಲ್ಲ.

ಚಿಕ್ಕಬಳ್ಳಾಪುರದ ಸರ್ಕಾರಿ ಪ್ರಥಮ ದರ್ಜೆ ಕಾಲೇಜಿನ ಬಗ್ಗೆ

1193 - ಶ್ರೀ ಸಿ.ವಿ. ವೆಂಕಟರಾಯಪ್ಪ (ಬಾಗೇಪಲ್ಲಿ) ; ಮಾನ್ಯ ಶಿಕ್ಷಣ ಸಚಿವರು ಈ ಕೆಳಕಂಡ ಪ್ರಶ್ನೆಗಳಿಗೆ ದಯವಿಟ್ಟು ಉತ್ತರಿಸುವರೆ?